# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:22-02-2019.

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

ರಾಜ್ಯದ ಎಲ್ಲಾ ಕಂದಾಯ ಉಪವಿಭಾಗಾಧಿಕಾರಿಗಳು,
ರಾಜ್ಯದ ಎಲ್ಲಾ ಕಂದಾಯ ಉಪವಿಭಾಗ.

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿ ಅಧ್ಯಕ್ಷ/ಉಪಾಧ್ಯಕ್ಷರ ವಿರುದ್ಧದ ಅವಿಶ್ವಾಸ ನಿರ್ಣಯ ಮಂಡನೆಗೆ ಸಂಬಂಧಿಸಿದಂತೆ ನಿಯಮಾನುಸಾರ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018 ದಿನಾಂಕ:25-01-2018.
2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018 ದಿನಾಂಕ: 25.01.2018.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ರವರ ಪತ್ರ ಸಂಖ್ಯೆ: ಆರ್‌ಡಿ 31 ಪಿಆರ್‌ಎಸ್ 2019, ದಿನಾಂಕ: 05.02.2019

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಮಾನ್ಯ ಉಚ್ಛ ನ್ಯಾಯಾಲಯದ ವಿಭಾಗೀಯ ಪೀಠವು ಅವಿಶ್ವಾಸ ನಿರ್ಣಯಕ್ಕೆ ಸಂಬಂಧಿಸಿದಂತೆ ರಿಟ್ ಅಪೀಲ್ ಸಂಖ್ಯೆ: 844/2018 ಹಾಗೂ ಇತರೆ ಸಂಬಂಧಿಸಿದ ಪ್ರಕರಣಗಳಲ್ಲಿ ದಿನಾಂಕ: 12-10-2018 ರಂದು ಅಂತಿಮ ಆದೇಶ ನೀಡಿರುತ್ತದೆ. ಮಾನ್ಯ ಉಚ್ಛ ನ್ಯಾಯಾಲಯದ ವಿಭಾಗಿಯ ಪೀಠವು ನೀಡಿರುವ ಅಂತಿಮ ಆದೇಶದನ್ವಯ ಉಲ್ಲೇಖ (1) ಮತ್ತು (2) ರಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ/ಉಪಾಧ್ಯಕ್ಷರ ವಿರುದ್ಧದ ಅವಿಶ್ವಾಸ ನಿರ್ಣಯ ಮಂಡನೆಗೆ ಸಂಬಂಧಿಸಿದಂತೆ ಅನುಸರಿಸಬೇಕಾದ ಕ್ರಮಗಳ ಬಗ್ಗೆ ವಿವರಿಸಲಾಗಿರುತ್ತದೆ(ಲಗತ್ತಿಸಿದೆ).

ಆದಾಗ್ಯೂ ಗ್ರಾಮ ಪಂಚಾಯತಿ ಅಧ್ಯಕ್ಷ/ಉಪಾಧ್ಯಕ್ಷರ ವಿರುದ್ಧದ ಅವಿಶ್ವಾಸ ನಿರ್ಣಯ ಮಂಡನೆಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 49(1) ಹಾಗೂ ಅದರಡಿ ರಚಿತವಾಗಿರುವ ಕರ್ನಾಟಕ ಪಂಚಾಯತ್ ರಾಜ್ (ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧದ ಅವಿಶ್ವಾಸ ಸೂಚನೆ ಮಂಡನೆ) ನಿಯಮಗಳು 1994 ರ ಪ್ರಕಾರ ಅವಿಶ್ವಾಸ ನಿರ್ಣಯದ ಮಂಡನೆಯ ಉದ್ದೇಶಿತ ನೋಟಿಸ್‌ನ್ನು ನಿಯಮಾನುಸಾರು ಪಡೆಯುವಲ್ಲಿ, ಸಭೆಯನ್ನು ಏರ್ಪಡಿಸುವಲ್ಲಿ ಹಾಗೂ ಸಭಾಸೂಚನಾ ಪತ್ರಗಳನ್ನು ಸದಸ್ಯರುಗಳಿಗೆ ನೀಡವಲ್ಲಿ ಉಪವಿಭಾಗಾಧಿಕಾರಿಗಳು ಲೋಪವೆಸಗುತ್ತಿರುವ ಬಗ್ಗೆ ರಿಟ್ ಅರ್ಜಿ ಸಂಖ್ಯೆ:

104204/2019 ರಲ್ಲಿ ಮಾನ್ಯ ನ್ಯಾಯ ಪೀಠವು ತೀವ್ರ ಆಕ್ಷೇಪ ವ್ಯಕ್ತಪಡಿಸಿ, ಕಂದಾಯ ಇಲಾಕೆಯ ಪ್ರಧಾನ ಕಾರ್ಯದರ್ಶಿಗಳನ್ನು ಪೀಠದ ಮುಂದೆ ಖುದ್ದಾಗಿ ಹಾಜರಾಗಿ ವಿವರಣೆ ನೀಡುವಂತೆ ತಿಳಿಸಿರುತ್ತದೆ. ಅದರಂತೆ ಮಾನ್ಯ ನ್ಯಾಯ ಪೀಠದ ಮುಂದೆ ಹಾಜರಾಗಿದ್ದ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಇನ್ನು ಮುಂದೆ ಇಂತಹ ಲೋಪಗಳು ಮರುಕಳಿಸದಂತೆ ಕ್ರಮವಹಿಸಲು ಸೂಚನೆ ನೀಡುವುದಾಗಿ ಹಾಗೂ ತಪ್ಪಿತಸ್ಥ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸುವುದಾಗಿ ಮಾನ್ಯ ನ್ಯಾಯಪೀಠದ ಮುಂದೆ ಹೇಳಿಕೆ ನೀಡಿರುವುದಾಗಿ ಉಲ್ಲೇಖ (3) ರಲ್ಲಿನ ತಮ್ಮ ಪತ್ರದಲ್ಲಿ ತಿಳಿಸಿರುತ್ತಾರೆ(ಪತ್ರ ಲಗತ್ತಿಸಿದೆ).

ಆದುದರಿಂದ ಉಲ್ಲೇಖ (1) ಮತ್ತು (2) ರಲ್ಲಿ ಸರ್ಕಾರದ ಪತ್ರ ಮತ್ತು ಸುತ್ತೋಲೆ ಅನುಸಾರ ಹಾಗೂ ಕರ್ನಾಟಕ ಪಂಚಾಯತ್ ರಾಜ್ (ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧದ ಅವಿಶ್ವಾಸ ಸೂಚನೆ ಮಂಡನೆ) ನಿಯಮಗಳು 1994 ರ ಪ್ರಕಾರ ಅವಿಶ್ವಾಸ ನಿರ್ಣಯದ ಮಂಡನೆಗೆ ಸಂಬಂಧಿಸಿದ ನೋಟಿಸ್‌ಗಳನ್ನು ಪಡೆಯುವುದು, ಸಭೆಗಳ ದಿನಾಂಕವನ್ನು ನಿಗಧಿಪಡಿಸುವುದು ಹಾಗೂ ಸಭಾ ಸೂಚನಾ ಪತ್ರಗಳನ್ನು ಸದಸ್ಯರಿಗೆ ನಿಗದಿತ ಅವಧಿಯೊಳಗೆ ಜಾರಿ ಮಾಡುವ ಪ್ರಕ್ರಿಯೆಯನ್ನು ನಿಯಮಾನುಸಾರ ಅನುಸರಿಸಬೇಕು. ತಪ್ಪಿದಲ್ಲಿ ಸಂಬಂಧಿಸಿದ ಅಧಿಕಾರಿ/ನೌಕರರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು.

ತಮ್ಮ ವಿಶ್ವಾಸಿ

2/12/19

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಯನ್ನು:

1) ಜಿಲ್ಲಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
2) ರಾಜ್ಯದ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳು.
3) ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
4) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
5) ಗಣಕ ಕೋಶ(ವೆಬ್‌ಸೈಟ್‌ನಲ್ಲಿ ಪ್ರಕಟಿಸಲು).

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ.
4) ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.